ಪ್ರ-330 -(8A)

**ವಿಧಾನಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

| | |
|---|---|
| ವಿಷಯ: | ರಾಜ್ಯದ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕಳೆದ ಎರಡು ವರ್ಷಗಳಿಂದ ದೇಶದಲ್ಲಿ ಕಾಡುತ್ತಿರುವ ಕೋವಿಡ್-19 ಸಾಂಕ್ರಾಮಿಕ ರೋಗದ ಕಾರಣದಿಂದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ ತುಂಬಾ ಕಡಿಮೆಯಾಗಿದೆ. ಭೌತಿಕ ತರಗತಿಗಳು ನಡೆಯದ ಕಾರಣದಿಂದ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆ ಕಡಿಮೆಯಾಗುತ್ತಿದೆ. ಇಂತಹ ಸಂದಿಗ್ಧ ಸಂದರ್ಭದಲ್ಲಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಿರಿಯ ತರಬೇತಿ ಅಧಿಕಾರಿಗಳಿಗೆ ಶೇಕಡ 50 ಕ್ಕಿಂತ ಕಡಿಮೆ ತರಬೇತುದಾರರು ಪ್ರವೇಶಾತಿ ಆಗಿದ್ದಲ್ಲಿ ವೇತನ ನಿಲ್ಲಿಸಲು ಆದೇಶ ಮಾಡಿರುವುದರಿಂದ ಸದರಿ ನೌಕರರಿಗೆ ತುಂಬಾ ತೊಂದರೆಯಾಗಿದೆ. ಕೋವಿಡ್-19 ಕಾರಣದಿಂದ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಶೇಕಡ 50 ಕ್ಕಿಂತ ಕಡಿಮೆ ದಾಖಲಾತಿ ಇರುವ ಕಾಲೇಜುಗಳ ಕಿರಿಯ ತರಬೇತಿ ಅಧಿಕಾರಿಗಳಿಗೆ ವೇತನ ತಡೆಹಿಡಿಯಬೇಕೆಂಬ ಆದೇಶವನ್ನು ವಾಪಸ್ ಪಡೆದು ಕೂಡಲೇ ವೇತನ ಬಿಡುಗಡೆ ಮಾಡಬೇಕೆಂಬ ವಿಷಯದ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ. |

*******

ಶೇ. 50ಕ್ಕಿಂತ ಕಡಿಮೆ ಪ್ರವೇಶಾತಿ ಇರುವ ಕಾಲೇಜುಗಳ ಕಿರಿಯ ತರಬೇತಿ ಅಧಿಕಾರಿಗಳಿಗೆ ವೇತನವನ್ನು ತಡೆಹಿಡಿಯಬೇಕೆಂಬ ಯಾವುದೇ ಆದೇಶವನ್ನು ಸರ್ಕಾರದ ಹಂತದಲ್ಲಿ ಹೊರಡಿಸಿರುವುದಿಲ್ಲ. 1997 ರ ಅನುದಾನ ಸಂಹಿತೆಯಲ್ಲಿ ಚಾಪ್ಟರ್-VII ರ ಕಂಡಿಕೆ 7(6) ರಲ್ಲಿ "In all cases where the enrollment is less than 50% of the permitted intake, prior approval of the director shall be necessary to commence the concerned trade or units". ಎಂಬ ನಿಯಮವಿರುತ್ತದೆ. ಸದರಿ ನಿಯಮದನ್ವಯ 2020-21ನೇ ಸಾಲಿನಲ್ಲಿ ರಾಜ್ಯದ 14 ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿನ 21 ವೃತ್ತಿ / ಘಟಕಗಳಲ್ಲಿ ಶೇ. 50 ಕ್ಕಿಂತ ಕಡಿಮೆ ಪ್ರವೇಶಾತಿ ದಾಖಲಾಗಿದ್ದು, ಅಂತಹ ವೃತ್ತಿ / ಘಟಕಗಳ ಸಿಬ್ಬಂದಿಗೆ ವೇತನ ಪಾವತಿಸುವ ಕುರಿತಂತೆ ಸರ್ಕಾರದ ಹಂತದಲ್ಲಿ ಸೂಕ್ತ ತೀರ್ಮಾನ ಕೈಗೊಳ್ಳಲು ಆಯುಕ್ತಾಲಯದಿಂದ ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ. ಸ್ವೀಕೃತವಾದ ಪ್ರಸ್ತಾವನೆಯನ್ನು ಪರಿಶೀಲಿಸಲು ಹೆಚ್ಚುವರಿ ಮಾಹಿತಿಯನ್ನು ಆಯುಕ್ತಾಲಯದಿಂದ ಕೋರಿದ್ದು, ಮಾಹಿತಿಯು ಸ್ವೀಕೃತವಾದ ಕೂಡಲೇ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

* * * *

**ಕೌಉಜೀಇ 98 ಕೈತಪ್ರ 2021**

(ಡಾ.ಸಿ.ಎನ್.ಅಶ್ವತ್ಥ ನಾರಾಯಣ)
**ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**